# Bangalore
# Regional News
# 21.05.2026 / 18.40 hrs
# ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ವೈದ್ಯಕೀಯ ಕಾಲೇಜುಗಳ ಪ್ರವೇಶಕ್ಕೆ ಸಿಇಟಿ ನಡೆಸಲು ರಾಜ್ಯಗಳಿಗೆ ಅವಕಾಶ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹ
2. ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಕುರಿತ ಊಹಾಪೋಹ ತಳ್ಳಿಹಾಕಿದ ಗೃಹ ಸಚಿವ ಡಾ. ಜಿ. ಪರಮೇಶ್ವರ್
3. ಅರಣ್ಯ ಭೂಮಿಯ ಇಂಡೀಕರಣಕ್ಕೆ ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸಚಿವ ಈಶ್ವರ್ ಖಂಡ್ರೆ ಸೂಚನೆ
4. ಬೆಂಗಳೂರಿನಲ್ಲಿ ಬಿಜೆಪಿ ಮಹತ್ವದ ಸಭೆ; ಪಕ್ಷ ಸಂಘಟನೆ ಕುರಿತಂತೆ ಚರ್ಚೆ
5. ಕರ್ನಾಟಕ ಪಬ್ಲಿಕ್ ಸ್ಕೂಲ್ ಪರಿಕಲ್ಪನೆಯ ಮರು ಚಿಂತನೆ ಅಗತ್ಯ – ಸಾಹಿತಿ ಬರಗೂರು ರಾಮಚಂದ್ರಪ್ಪ ಅಭಿಮತ

---

ವೈದ್ಯಕೀಯ ಕಾಲೇಜುಗಳ ಪ್ರವೇಶಕ್ಕೆ ನಡೆಸುವ ಸಿಇಟಿ ಪರೀಕ್ಷೆಯನ್ನು ನಡೆಸಲು ರಾಜ್ಯಗಳಿಗೆ ಅವಕಾಶ ನೀಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ನೀಟ್ ಪರೀಕ್ಷೆಯಲ್ಲಿನ ಅಕ್ರಮಗಳನ್ನು ಖಂಡಿಸಿ, ಯುವ ಕಾಂಗ್ರೆಸ್ ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಭಾಗಿಯಾದ ಅವರು, ಪ್ರಧಾನಿ, ನೀಟ್ ವಿದ್ಯಾರ್ಥಿಗಳ ಕ್ಷಮೆ ಕೋರಬೇಕು ಎಂದು ಆಗ್ರಹಿಸಿದ್ದಾರೆ.
ದೇಶದ ಜ್ವಲಂತ ಸಮಸ್ಯೆ ಬಗ್ಗೆ ಬಿಜೆಪಿಯ ಯಾವ ಸಚಿವರಿಗೂ ತಿಳಿವಳಿಕೆ ಇಲ್ಲ. ದೇಶದ ಭವಿಷ್ಯದ ಕುರಿತು ಬಿಜೆಪಿ ಗಂಭೀರವಾಗಿಲ್ಲ ಎಂದು ದೂರಿದ್ದಾರೆ.
2016ರಲ್ಲಿ ನೀಟ್ ವ್ಯವಸ್ಥೆ ಬಂದ ಬಳಿಕ ವೈದ್ಯಕೀಯ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಐದು ಬಾರಿ ಸೋರಿಕೆಯಾಗಿವೆ. ಕರ್ನಾಟಕವು ಅತ್ಯುತ್ತಮವಾದ ಸಿಇಟಿ ಪರೀಕ್ಷೆ ನಡೆಸಿ, ಮಕ್ಕಳನ್ನು ಮೆಡಿಕಲ್ ಕೋರ್ಸ್‌ಗಳಿಗೆ ಆಯ್ಕೆ ಮಾಡುತ್ತಿತ್ತು. ಆದರೆ ಕೇಂದ್ರ ಸರ್ಕಾರ ಒಕ್ಕೂಟ ವ್ಯವಸ್ಥೆಯನ್ನು ಹಾಳುಗೆಡವಿ, ನೀಟ್ ವ್ಯವಸ್ಥೆ ಜಾರಿಗೆ ತಂದಿದೆ ಎಂದು ಕೇಂದ್ರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.
ಕೂಡಲೇ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡುವಂತೆ ಆಗ್ರಹಿಸಿದ್ದಾರೆ.

---

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಕುರಿತ ಊಹಾಪೋಹಗಳನ್ನು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಳ್ಳಿಹಾಕಿದ್ದಾರೆ.
ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಹುದ್ದೆಗೆ ಸಂಬಂಧಿಸಿದಂತೆ ಯಾವುದೇ ನಿರ್ಧಾರವನ್ನು ಪಕ್ಷದ ಹೈಕಮಾಂಡ್ ತೆಗೆದುಕೊಳ್ಳಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.
ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿಯನ್ನಾಗಿ ಆಯ್ಕೆ ಮಾಡಿದಾಗ ಅವರಿಗೆ ಯಾವುದೇ ಅಧಿಕಾರಾವಧಿಯನ್ನು ನಿಗದಿಪಡಿಸಲಾಗಿಲ್ಲ. ಹೈಕಮಾಂಡ್ ಇಲ್ಲವೇ ಪಕ್ಷದ ಪ್ರಧಾನ ಕಾರ್ಯದರ್ಶಿಗಳು ಈ ಬಗ್ಗೆ ಯಾವುದೇ ಮಾಹಿತಿ ನೀಡಿಲ್ಲ ಎಂದು ತಿಳಿಸಿದ್ದಾರೆ.

---

ಪರಿಹಾರ ಅರಣ್ಯೀಕರಣ ನಿಧಿಯಡಿ ಅರಣ್ಯ ಭೂಮಿ ರಕ್ಷಣೆಗೆ ಹಣ ಒದಗಿಸಲು ಅವಕಾಶವಿದ್ದು, ನಗರ ಮತ್ತು ಪಟ್ಟಣದ ಸಮೀಪ ಇರುವ ಕೋಟ್ಯಂತರ ರೂಪಾಯಿ ಬೆಲೆ ಬಾಳುವ ಅರಣ್ಯ ಭೂಮಿ ಒತ್ತುವರಿ ಆಗದಂತೆ ಬೇಲಿ ಹಾಕಲು ಅರಣ್ಯ ಸಚಿವ ಈಶ್ವರ್ ಖಂಡ್ರೆ ಅರಣ್ಯಾಧಿಕಾರಿಗಳಿಗೆ ಸೂಚಿಸಿದ್ದಾರೆ.
ಬೆಂಗಳೂರಿನಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಅರಣ್ಯ ಪ್ರದೇಶದಲ್ಲಿ ಒತ್ತುವರಿಯಾಗಿರುವಂತಹ ಭೂಮಿ ಗುರುತಿಸಿ ಬೇಲಿಹಾಕಬೇಕು. ಸ್ಥಳೀಯ ಪ್ರಭೇದದ ಸಸಿಗಳನ್ನು ನೆಟ್ಟು ನೆಡುತೋಪು ಅಭಿವೃದ್ಧಿಪಡಿಸುವಂತೆ ನಿರ್ದೇಶನ ನೀಡಿದ್ದಾರೆ.

ಈ ಹಿಂದೆ ರಾಜರ ಆಳ್ವಿಕೆ ಕಾಲದಲ್ಲಿ ಮತ್ತು ಸರ್ಕಾರದಿಂದ ಅರಣ್ಯ ಎಂದು ಗೆಜೆಟ್ ಅಧಿಸೂಚನೆ ಆಗಿದ್ದರೂ ಇನ್ನೂ ಕೆಲವು ಕಡೆ ಅರಣ್ಯ ಎಂದು ಇಂಡೀಕರಣ ಆಗಿಲ್ಲ, ಹೀಗಾಗಿ ಆರ್.ಟಿ.ಸಿ.ಯಲ್ಲಿ ಅರಣ್ಯ ಎಂದು ದಾಖಲಾಗದ ಕಾರಣ ಅಕ್ರಮ ಮಂಜೂರಾತಿ, ಒತ್ತುವರಿ ಆಗುತ್ತಿದೆ. ಕೂಡಲೇ ಇಂಡೀಕರಣಕ್ಕೆ ಕ್ರಮ ವಹಿಸುವಂತೆ ಸಚಿವರು ಸೂಚಿಸಿದ್ದಾರೆ.

ತುಮಕೂರು ಜಿಲ್ಲೆಯಲ್ಲಿ ನಾಡಿನತ್ತ ಚಿರತೆಗಳು ಆಗಮಿಸುತ್ತಿದ್ದು, ಅವುಗಳನ್ನು ಹಿಡಿದು ಕಾಡಿಗೆ ಮರಳಿಸಲು ಅಥವಾ ಪುನರ್ವಸತಿ ಕೇಂದ್ರಗಳಿಗೆ ಸ್ಥಳಾಂತರಿಸಲು ಕೂಡಲೇ ಚಿರತೆ ಕಾರ್ಯಪಡೆ ಆರಂಭಿಸುವಂತೆ ತಿಳಿಸಿದ್ದಾರೆ.

---

ರಾಜ್ಯದ ಪ್ರಸಿದ್ಧ ಪ್ರವಾಸಿ ತಾಣಗಳಲ್ಲಿ ಒಂದಾದ ಶಿವಮೊಗ್ಗದ ಸಕ್ರೆಬೈಲು ಆನೆ ಬಿಡಾರಕ್ಕೆ ನಾಳೆಯಿಂದ ಪ್ರವಾಸಿಗರ ಪ್ರವೇಶ ನಿಷೇಧಿಸಲಾಗಿದೆ.

ಕಳೆದ ಕೆಲ ದಿನಗಳ ಹಿಂದೆ ಕೊಡಗಿನ ದುಬಾರೆ ಆನೆ ಬಿಡಾರದಲ್ಲಿ ಸಾಕಾನೆಗಳ ಕಾದಾಟದ ಸಂದರ್ಭದಲ್ಲಿ ಪ್ರವಾಸಿ ಮಹಿಳೆ ಹಾಗೂ ಆನೆ ಮೃತಪಟ್ಟಿತ್ತು. ಈ ಪ್ರಕರಣವನ್ನ ಅತ್ಯಂತ ಗಂಭೀರವಾಗಿ ಪರಿಗಣಿಸಿರುವ ಅರಣ್ಯ ಸಚಿವರು, ಆನೆ ಬಿಡಾರಗಳಲ್ಲಿ ಕಟ್ಟುನಿಟ್ಟಿನ ಎಸ್‌ಓಪಿ ಜಾರಿಗೆ ತರುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಸಕ್ರೆಬೈಲು ಆನೆ ಬಿಡಾರವನ್ನ ಮುಂದಿನ ಆದೇಶವರೆಗೆ ಸ್ಥಗಿತಗೊಳಿಸಿ ಪ್ರವಾಸಿಗರಿಗೆ ನಿರ್ಬಂಧ ವಿಧಿಸಲಾಗಿದೆ.

ಅರಣ್ಯ ಇಲಾಖೆಯ ಈ ನಿರ್ಧಾರಕ್ಕೆ ಪ್ರವಾಸಿಗರು ಅಸಮಾಧಾನ ವ್ಯಕ್ತಪಡಿಸಿದ್ದು, ದೂರದಿಂದ ಆನೆಗಳನ್ನ ನೋಡಲು ಆಗಮಿಸುವವರಿಗೆ ಅವಕಾಶ ನೀಡಬೇಕು ಎಂದು ಮನವಿ ಮಾಡಿದ್ದಾರೆ.

---

ಶಾಲಾ ಪರೀಕ್ಷಾ ಮತ್ತು ಮೌಲ್ಯ ನಿರ್ಣಯ ಮಂಡಳಿ ದ್ವಿತೀಯ ಪಿಯುಸಿ ಪರೀಕ್ಷೆ–2ರ ಫಲಿತಾಂಶವನ್ನು ಇಂದು ಪ್ರಕಟಿಸಿದ್ದು, ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗಗಳಲ್ಲಿ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ಮಾಡಿದ್ದಾರೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಸರ್ಕಾರದ ಹಲವು ವಿದ್ಯಾರ್ಥಿ ಸ್ನೇಹಿ ಕ್ರಮಗಳ ಮೂಲಕ ರಾಜ್ಯದ ಒಟ್ಟು ಕ್ರೋಢೀಕೃತ ಫಲಿತಾಂಶವು ಶೇಕಡ 92.25ಕ್ಕೆ ಏರಿಕೆಯಾಗಿದೆ ಎಂದು ಪತ್ರಿಕಾ ಪ್ರಕಟಣೆಯ ಮೂಲಕ ಮಾಹಿತಿ ನೀಡಿದ್ದಾರೆ.

ಕಲಾ ವಿಭಾಗದಲ್ಲಿ ಶೇಕಡ 83.31, ವಾಣಿಜ್ಯ ವಿಭಾಗದಲ್ಲಿ ಶೇಕಡ 92.84, ವಿಜ್ಞಾನ ವಿಭಾಗದಲ್ಲಿ ಶೇಕಡ 96.1ಕ್ಕೆ ಫಲಿತಾಂಶ ಏರಿಕೆಯಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

---

ಮುಂದಿನ 15 ದಿನಗಳೊಳಗೆ ಸಂಪುಟ ವಿಸ್ತರಣೆ ಕುರಿತಂತೆ ಸ್ಪಷ್ಟ ಚಿತ್ರಣ ಸಿಗಲಿದೆ ಎಂದು ಆಹಾರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ.

ದೇವನಹಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೈಕಮಾಂಡ್ ತೀರ್ಮಾನಕ್ಕೆ ನಾವೆಲ್ಲರೂ ಬದ್ಧರಾಗಿರುವುದಾಗಿ ತಿಳಿಸಿದ್ದಾರೆ. ತುಮಕೂರಿನಲ್ಲಿ ಮೂರನೇ ವರ್ಷದ ಸಮಾವೇಶ ಯಶಸ್ವಿಯಾಗಿ ನಡೆದಿದ್ದು, ಐದು ಗ್ಯಾರಂಟಿಗಳನ್ನು ಜಾರಿಗೆ ತರುವುದರ ಮೂಲಕ ಸರ್ಕಾರ ಜನರಿಗೆ ಮತ್ತಷ್ಟು ಹತ್ತಿರವಾಗಿದೆ ಎಂದು ಹೇಳಿದ್ದಾರೆ.

---

ಬೆಂಗಳೂರಿನಲ್ಲಿಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದ ಪಕ್ಷದ ಸಂಘಟನಾ ಸಭೆ ನಡೆಯಿತು. ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿಗಳಾದ ಶಿವಪ್ರಕಾಶ್, ರಾಜ್ಯ ಉಸ್ತುವಾರಿ ರಾಧಾ ಮೋಹನ್ ಅಗರ್‌ವಾಲ್ ರಾಜ್ಯದಲ್ಲಿ ಪಕ್ಷ ಸಂಘಟನೆ ಕುರಿತಂತೆ ಮಾರ್ಗದರ್ಶನ ನೀಡಿದ್ದಾರೆ.

ಸಭೆಯಲ್ಲಿ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದರು ಮತ್ತು ಶಾಸಕರು ಉಪಸ್ಥಿತರಿದ್ದರು.

---

ರಾಜ್ಯ ಸರ್ಕಾರ ಆರಂಭಿಸುತ್ತಿರುವ ಕರ್ನಾಟಕ ಪಬ್ಲಿಕ್ ಸ್ಕೂಲ್ ಪರಿಕಲ್ಪನೆಯ ಪರಿಣಾಮಗಳ ಕುರಿತು ಮರು ಪರಿಶೀಲನೆಯ ಅಗತ್ಯವಿದೆ ಎಂದು ಪ್ರಗತಿಪರ ಲೇಖಕ ನಾಡೋಜ ಬರಗೂರು ರಾಮಚಂದ್ರಪ್ಪ ತಿಳಿಸಿದ್ದಾರೆ.

ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಆಯೋಜಿಸಿದ್ದ ಅನ್ನದ ಭಾಷೆಯಾಗಿ ಕನ್ನಡ ರಾಷ್ಟ್ರೀಯ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು, ಈ ಹೊಸ ಯೋಜನೆಯಿಂದ ಸುತ್ತಮುತ್ತಲಿನ ಸರ್ಕಾರಿ ಶಾಲೆಗಳು ಮುಚ್ಚುವ ಗಂಭೀರ ಬಿಕ್ಕಟ್ಟು ಸೃಷ್ಟಿಯಾಗಬಹುದು ಎಂದು ಅಭಿಪ್ರಾಯಪಟ್ಟಿದ್ದಾರೆ.

---

ದೇಶಾದ್ಯಂತ ಇಂಧನ ಮತ್ತು ಎಲ್‌ಪಿಜಿ ಕೊರತೆಯ ಬಗ್ಗೆ ಸಾರ್ವಜನಿಕರು ವದಂತಿಗಳನ್ನು ನಂಬದಂತೆ ಭಾರತದ ಪ್ರಮುಖ ಸರ್ಕಾರಿ ಸ್ವಾಮ್ಯದ ತೈಲ ಮಾರುಕಟ್ಟೆ ಕಂಪನಿಗಳು ಮನವಿ ಮಾಡಿವೆ.
ಇಂಧನ ಕೊರತೆಯ ಬಗ್ಗೆ ಸಾಮಾಜಿಕ ಮಾಧ್ಯಮಗಳಲ್ಲಿ ಬರುತ್ತಿರುವ ವದಂತಿಗಳನ್ನು ತಳ್ಳಿಹಾಕಿರುವ ಸಂಸ್ಥೆ ಕರ್ನಾಟಕದಲ್ಲಿ ಇಂಧನ ಮತ್ತು ಎಲ್‌ಪಿಜಿ ಸರಬರಾಜು ಸ್ಥಿರವಾಗಿದೆ ಎಂದು ಸ್ಪಷ್ಟಪಡಿಸಿದೆ.
ಕರ್ನಾಟಕ ಸರ್ಕಾರವು ಈವರೆಗೆ ಒಂದು ಸಾವಿರದ 874 ಎಲ್‌ಪಿಜಿ ಸಿಲಿಂಡರ್‌ಗಳನ್ನು ವಶಪಡಿಸಿಕೊಂಡಿದ್ದು, ಪ್ರಕರಣ ದಾಖಲಿಸಿದೆ ಎಂದು ಮಾಹಿತಿ ನೀಡಿದೆ.

---

ಯಾದಗಿರಿ ಜಿಲ್ಲೆಯ ಹತ್ತಿಕುಣಿ ಜಲಾಶಯ ವ್ಯಾಪ್ತಿಯ ಆರು ಗ್ರಾಮಗಳ ಕೃಷಿ ಭೂಮಿಗೆ ಸಮತೋಲನ ನೀರು ಪೂರೈಸುವ ಎಂ–ಕ್ಯಾಡ್ ಯೋಜನೆ ಹಂತ–1ಕ್ಕೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ ಎಂದು ಭಾರತ ಸರ್ಕಾರದ ಜಲಶಕ್ತಿ ಸಚಿವಾಲಯದ ಹಿರಿಯ ಜಂಟಿ ಆಯುಕ್ತ ಜಿ.ಕೆ. ಅಂಬಲಿ ತಿಳಿಸಿದ್ದಾರೆ.
'ರೈತರಿಗೆ ಸಮೃದ್ಧಿಯ ಪಾಠಶಾಲೆ' ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಭಾಗಿತ್ವದಲ್ಲಿ 72 ಕೋಟಿ ರೂಪಾಯಿ ವೆಚ್ಚದಲ್ಲಿ ಯೋಜನೆ ಜಾರಿಯಾಗಲಿದ್ದು, ಕೇಂದ್ರ ಸರ್ಕಾರ ಶೇಕಡ60 ಹಾಗೂ ರಾಜ್ಯ ಸರ್ಕಾರ ಶೇಕಡ 40 ರಷ್ಟು ಅನುದಾನ ನೀಡಲಿದೆ ಎಂದು ತಿಳಿಸಿದ್ದಾರೆ.
ಈ ಯೋಜನೆಯಿಂದ ಹತ್ತಿಕುಣಿ, ಯಡ್ಡಳ್ಳಿ, ಬಂದಳ್ಳಿ, ದಸ್ತಾಬಾದ್, ಹೊಸಗೇರಾ ಹಾಗೂ ಮುಂಡರಗಿ ಗ್ರಾಮಗಳ ಕೊನೆಯ ಭಾಗದ ರೈತರಿಗೆ ಸಮರ್ಪಕ ನೀರಾವರಿ ಸೌಲಭ್ಯ ದೊರೆಯಲಿದೆ ಎಂದು ಹೇಳಿದ್ದಾರೆ.

---

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ಹಾಡೋನಹಳ್ಳಿ ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರದಲ್ಲಿ ವಿಶ್ವ ಜೇನು ನೊಣಗಳ ದಿನಾಚರಣೆಯನ್ನು "ಜನರ ಮತ್ತು ಭೂಮಿಯ ಒಳಿತಿಗಾಗಿ: ಜೇನುನೊಣಗಳು ನಮ್ಮೆಲ್ಲರನ್ನು ಉಳಿಸಿ ಬೆಳೆಸುವ ಸಹಭಾಗಿತ್ವ" ಎಂಬ ಧ್ಯೇಯ ವಾಕ್ಯದಡಿ ಆಚರಿಸಲಾಯಿತು.
ಕೃಷಿ ವಿಜ್ಞಾನ ಕೇಂದ್ರದ ಜೇನುಕೃಷಿ ವಿಜ್ಞಾನಿ ಡಾ. ಜಿ. ಈಶ್ವರಪ್ಪ ಮಾತನಾಡಿ, ಜೇನುನೊಣಗಳು ಉತ್ತಮ ಪರಾಗ ಸ್ಪರ್ಶ ಕೀಟಗಳಾಗಿದ್ದು, ಅನೇಕ ಆಹಾರ ಮತ್ತು ತೋಟಗಾರಿಕೆ ಬೆಳೆಗಳ ಇಳುವರಿ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ತಿಳಿಸಿದ್ದಾರೆ. ಜೇನು ಕುಟುಂಬಗಳನ್ನು ಕೀಟನಾಶಕ ಹಾಗೂ ರಾಸಾಯನಿಕ ವಸ್ತುಗಳ ಬಳಕೆಯಿಂದ ರಕ್ಷಣೆ ಮಾಡಿ ಸಂತತಿಯನ್ನು ಹೆಚ್ಚಿಸುವಂತೆ ಸಲಹೆ ನೀಡಿದ್ದಾರೆ.

---

<u>ಸಂಕ್ಷಿಪ್ತ ಸುದ್ದಿ</u>

1. ಹಾವೇರಿ ಜಿಲ್ಲೆಯಾದ್ಯಂತ ಮುಂಬರುವ ಮಳೆಗಾಲದ ಸಂದರ್ಭದಲ್ಲಿ ಭಾರೀ ಮಳೆ, ಗಾಳಿ ಹಾಗೂ ಗುಡುಗು–ಮಿಂಚು ಸಂಭವಿಸುವ ಸಾಧ್ಯತೆ ಇರುವುದರಿಂದ, ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಸೂಚನೆ ನೀಡಿದ್ದಾರೆ.
2. ಯಾದಗಿರಿ ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ ರಾಹುಲ್ ಪಾಂಡ್ವೆ ತುಕಾರಾಮ್ ಇಂದು ಅಧಿಕಾರ ಸ್ವೀಕರಿಸಿದ್ದಾರೆ.
3. ವಿಜಯಪುರ ಜಿಲ್ಲೆಯಲ್ಲಿ ಅನಧಿಕೃತವಾಗಿ ಹೋಂ ಸ್ಟೇ ನಡೆಸುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಎಚ್ಚರಿಕೆ ನೀಡಿದ್ದಾರೆ.
4. ವಿಜಯನಗರ ಜಿಲ್ಲೆಯ ಎಲ್ಲಾ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಇದೇ 30ರಂದು ನಗರದ ಮಾಹಿತಿ ಹಕ್ಕು ಕಾಯ್ದೆ ಕುರಿತು ಒಂದು ದಿನದ ಕಾರ್ಯಾಗಾರ ಹಾಗೂ ಸಂವಾದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

5. ರಾಷ್ಟ್ರೀಯ ಮತ್ತು ರಾಜ್ಯದ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಬಳ್ಳಾರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಜುಲೈ 11 ರಂದು ಜಿಲ್ಲಾ ನ್ಯಾಯಾಲಯದಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ಹಮ್ಮಿಕೊಳ್ಳಲಾಗಿದೆ.

____________ ಮುಕ್ತಾಯ ____________